ದಿನಾಂಕಃ 14-05-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆ: ಅರ್ಜಿದಾರ ಪರ ವಕೀಲರಿಂದ:**

ನಾನು ನನ್ನ ಸಾಕ್ಷ್ಯ ಪ್ರಮಾಣ ಪತ್ರವನ್ನು ಹಾಜರಪಡಿಸಿದ್ದು, ಅದರಲ್ಲಿ ಬರೆದ ವಿಷಯಗಳು ಸರಿ ಇರುತ್ತವೆ. ಸದರಿ ವಿಷಯವನ್ನು ತಿಳಿದುಕೊಂಡು ನಾನು ನನ್ನ ಸಾಕ್ಷ್ಯ ಪ್ರಮಾಣ ಪತ್ರದ ಮೇಲೆ ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲ ಸಂಗತಿಗಳು ನಿಜ ಇರುತ್ತವೆ. ನನ್ನ ಅರ್ಜಿಗೆ ಪೂರಕವಾಗಿ ಕೆಲವೊಂದು ದಾಖಲೆಗಳನ್ನು ಹಾಜರಪಡಿರಸಿರುತ್ತೇನೆ. ಅವುಗಳನ್ನು ಗುರುತಿಸುವಂತೆ ಕೋರುತ್ತಾರೆ.

| | |
|---|---|
| 1. | ಪ್ರ.ವ. ವರದಿಯನ್ನು ದೂರಿನೊಂದಿಗೆ ದೃಢೀಕೃತ ನಕಲು ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು. |
| 2. | ಪಂಚನಾಮೆಯ ದೃಢೀಕೃತ ನಕಲು ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-2 ಎಂದು ಗುರುತಿಸಲಾಯಿತು. |
| 3. | ಐಎಂವಿ ವರದಿಯ ದೃಢೀಕೃತ ನಕಲು ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು. |
| 4. | ಗಾಯದ ಪ್ರಮಾಣ ಪತ್ರದ ದೃಢೀಕೃತ ನಕಲು ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು. |
| 5. | ಅಂತಿಮ ವರದಿಯ ದೃಢೀಕೃತ ನಕಲು ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-5 ಎಂದು ಗುರುತಿಸಲಾಯಿತು. |
| 6. | 8 ಬಿಲ್ ಗಳನ್ನು ಹಾಜರಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-6 ರಿಂದ 13 ಎಂದು ಗುರುತಿಸಲಾಯಿತು. |
| 7. | ಸ್ಕ್ಯಾನಿಂಗ್ ಬಿಲ್ ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-14 ಎಂದು ಗುರುತಿಸಲಾಯಿತು. |
| 8. | ಡಿಸ್ಚಾರ್ಜ ಸಮರಿ ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-15 ಎಂದು ಗುರುತಿಸಲಾಯಿತು. |
| 9. | ಅಂತಿಮ ಬಿಲ್ ಹಾಜರಪಡಿಸಿರುತ್ತೇನೆ. ಅದನ್ನು ನಿಪಿ-16 ಎಂದು ಗುರುತಿಸಲಾಯಿತು. |
| 10. | ಆಧಾರ ಕಾರ್ಡ, ಪ್ಯಾನ ಕಾರ್ಡ ಮತ್ತು ಬ್ಯಾಂಕ್ ಪುಸ್ತಕದ ನಕಲುಗಳನ್ನು ಹಾಜರಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-17 ರಿಂದ 19 ಎಂದು ಗುರುತಿಸಲಾಯಿತು. |
| 11. | ಎರಡು ಪಹಣಿ ಪತ್ರಿಕೆಗಳನ್ನು ಹಾಜರಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-20 ಮತ್ತು 21 ಎಂದು ಗುರುತಿಸಲಾಯಿತು. |

ಆದ್ದರಿಂದ ನಾನು ಸಲ್ಲಿಸಿದ ಅರ್ಜಿಯನ್ನು ಪುರಸ್ಕರಿಸಿ, ಪರಿಹಾರವನ್ನು ಮಂಜೂರು ಮಾಡುವಂತೆ ಕೊರುತ್ತೇನೆ.

<u>ಪಾಟೀ ಸವಾಲು:</u>

ಎದುರುದಾರರು ವಕೀಲರ ಮೂಲಕ ಹಾಜರಾಗಿರುತ್ತಾರೆ, ಆದರೆ ತಕರಾರು ಸಲ್ಲಿಸದೇ ಇರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಅಂತಾ ಒಪ್ಪಿರುವರು.

ASHAPPA Digitally signed by ASHAPPA Date: 2025.05.14 12:26:34 +0530

ಹಿರಿಯ ದಿವಾಣಿ ನ್ಯಾಯಾಧೀಶರು,
ಮತ್ತು ಪ್ರ.ದ.ನ್ಯಾ.ದಂ.ಗಳು, ಬನಹಟ್ಟಿ